## ನಗರ-ಪುರಸಭೆ ಅಧ್ಯಕ್ಷರ ಸಭೆ

# ಮುಲಾಜಿಲ್ಲದೇ ತೆರಿಗೆ ವಸೂಲಿ ಮಾಡಲು ಸಿ.ಎಂ. ಆದೇಶ

ಬೆಂಗಳೂರು ೭. ಬಾಕಿ ಇರುವ ತೆರಿಗೆಯನ್ನು ಯಾವುದೇ ಮುಲಾಜಿಲ್ಲದೇ ಸಂಗ್ರಹಿಸುವಂತೆ ಮುಖ್ಯಮಂತ್ರಿ ಯಡಿಯೂರಪ್ಪ ಸ್ಥಳೀಯ ಸಂಸ್ಥೆಗಳಿಗೆ ಆದೇಶ ನೀಡಿದ್ದಾರೆ. ನಗರಾಭಿವೃದ್ಧಿಗೆ ತೆರಿಗೆ ಸಂಗ್ರಹ ಅನಿವಾರ್ಯ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ಇನ್ನೊಂದೆಡೆ ಭೂ ಸ್ವಾಧೀನಕ್ಕೆ ರೈತರ ವಿರೋಧ ಮತ್ತು ಕೇಂದ್ರ ಸರಕಾರ ವಿಳಂಬ ಧೋರಣೆಯಿಂದಾಗಿ ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣ ಕಾರ್ಯ ವಿಳಂಬವಾಗುತ್ತಿದೆ ಎಂದು ಮುಖ್ಯಮಂತ್ರಿ ಹೇಳಿದ್ದಾರೆ.

ಮಹಾನಗರ ಪಾಲಿಕೆಗಳ ಮೇಯರ, ನಗರಸಭಾ ಅಧ್ಯಕ್ಷರು ಹಾಗೂ ಪುರಸಭಾ ಅಧ್ಯಕ್ಷ ಸಭೆ ಇಂದು ಮುಖ್ಯಮಂತ್ರಿ ನೇತೃತ್ವದಲ್ಲಿ ನಡೆಯಿತು. ವಿಧಾನಸೌಧದಲ್ಲಿ ನಡೆದ ಸಭೆಯಲ್ಲಿ ನಗರಾಭಿವೃದ್ಧಿ ಸಚಿವ ಸುರೇಶಕುಮಾರ ಹಾಗೂ ಸರಕಾರದ ಹಿರಿಯ ಅಧಿಕಾರಿಗಳು ಪಾಲ್ಗೊಂಡಿದ್ದರು.

ಬಳಿಕ ಮಾತನಾಡಿದ ಮುಖ್ಯಮಂತ್ರಿ ಯಡಿಯೂರಪ್ಪ ದೇಶದ ನಾಗರೀಕರಣ ತೀವ್ರಗತಿಯಲ್ಲಿ ಸಾಗಿದೆ. ರಾಜ್ಯದ ಪ್ರಗತಿ ಪ್ರತಿವರ್ಷ ಶೇ. ೩೪ ರಷ್ಟಿದೆ ಎಂದು ಮಾಹಿತಿ ನೀಡಿದರು.

ಈ ಹಿನ್ನೆಲೆಯಲ್ಲಿ ಸಾರ್ವಜನಿಕರಿಂದ ಬಾಕಿ ತೆರಿಗೆಯನ್ನು ನಿರ್ದಾಕ್ಷಿಣ್ಯವಾಗಿ ಸಂಗ್ರಹಿಸುವಂತೆ ಅಧಿಕಾರಿಗಳಿಗೆ ಸಿ.ಎಂ. ಆದೇಶ ನೀಡಿದರು.

ರಸ್ತೆ ಕಾಮಗಾರಿ ಹಾಗೂ ಹೆದ್ದಾರಿ ನಿರ್ಮಾಣದ ಬಗ್ಗೆ ಇಲಾಖೆಯ ಅಧಿಕಾರಿಗಳ ಜೊತೆ ಯಡಿಯೂರಪ್ಪ ಸಮಾಲೋಚನೆ ನಡೆಸಿದರು.

ಸಭೆಯ ಬಳಿಕ ಮಾತನಾಡಿದ ಯಡಿಯೂರಪ್ಪ, ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿಗಳ ಅಭಿವೃದ್ಧಿ ಕುರಿತು ಚರ್ಚಿಸಲಾಗಿದೆ ಎಂದು ಹೇಳಿದರು.

ಭೂಸ್ವಾಧೀನಕ್ಕೆ ರೈತರ ವಿರೋಧ ವ್ಯಕ್ತವಾಗುತ್ತಿದೆ. ಇನ್ನೊಂದೆಡೆ ಕೇಂದ್ರ ವಿಳಂಬ ಧೋರಣೆ ಅನುಸರಿಸುತ್ತಿದೆ. ಹೀಗಾಗಿ ರಾಷ್ಟ್ರೀಯ ಹೆದ್ದಾರಿಗಳ ನಿರ್ಮಾಣ ಕಾರ್ಯ ವಿಳಂಬವಾಗುತ್ತಿದೆ ಎಂದರು.